ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತಮೂರನೆಯ ಅಧಿವೇಶನ

ಗುರುವಾರ, ದಿನಾಂಕ: 4ನೇ ಫೆಬ್ರುವರಿ, 2021

ನಿರ್ಭಯ ಯೋಜನೆಯ ಜಾರಿ ಕುರಿತು

ಶ್ರೀ ಯು.ಬಿ.ವೆಂಕಟೇಶ್ (ನಾಮನಿರ್ದೇಶನ ಹೊಂದಿದವರು):-

401 (469) ಮಾನ್ಯ ಗೃಹ ಮತ್ತು ಕಾನೂನು ಸಂಸದೀಯ ವ್ಯವಹಾರಗಳ ಹಾಗೂ ಶಾಸನ ರಚನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕೇಂದ್ರ ಸರ್ಕಾರದ ನಿರ್ಭಯ ಯೋಜನೆಯಡಿಯಲ್ಲಿ ರಾಜ್ಯಕ್ಕೆ ಮಂಜೂರಾಗಿರುವ ಅನುದಾನ ಎಷ್ಟು; ಹಾಗೂ ಬಿಡುಗಡೆಯಾಗಿರುವ ಅನುದಾನ ಎಷ್ಟು; (ವಿವರಗಳನ್ನು ನೀಡುವುದು)

(ಆ) ಸದರಿ ಅನುದಾನದ ``ಸೇಫ್ ಸಿಟಿ ಪ್ರಾಜೆಕ್ಟ್''ಗೆ ಸಂಬಂಧಿಸಿದಂತೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು;

(ಇ) ``ಸೇಫ್ ಸಿಟಿ ಪ್ರಾಜೆಕ್ಟ್'' ಇ-ಟೆಂಡರ್ ಕರೆಯಲಾಗಿದೆಯೇ; ಹಾಗಿದ್ದಲ್ಲಿ, ಟೆಂಡರ್‌ನಲ್ಲಿ ಭಾಗವಹಿಸಲು ಯಾವ ಯಾವ ನಿರ್ಬಂಧನೆಗಳನ್ನು ವಿಧಿಸಲಾಗಿತ್ತು; ಟೆಂಡರ್‌ನಲ್ಲಿ ಭಾಗವಹಿಸಿರುವ ಕಂಪನಿಗಳು ಯಾವುವು; ಅವುಗಳಲ್ಲಿ ಅರ್ಹವಾದ ಕಂಪನಿಗಳು ಯಾವುವು; ಯಾವ ಕಂಪನಿಗೆ ಟೆಂಡರ್ ಮಂಜೂರಾಗಿದೆ; (ದಾಖಲೆಯನ್ನು ನೀಡುವುದು) ಅಥವಾ ಟೆಂಡರ್ ರದ್ದುಗೊಳಿಸಿದ್ದರೆ ಅದಕ್ಕೆ ಕಾರಣಗಳೇನು;

(ಈ) ಟೆಂಡರ್ ಮಂಜೂರಾತಿಯ ಬಗ್ಗೆ ಸಾಮಾಜಿಕ ಜಾಲತಾಣಗಳಲ್ಲಿ ಪೊಲೀಸ್ ಅಧಿಕಾರಿಗಳು ಟೀಕೆ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ತೆಗೆದುಕೊಂಡ ಕ್ರಮಗಳೇನು?